ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಗುರುವಾರ, ದಿನಾಂಕ : 24 ನೇ ಸೆಪ್ಟೆಂಬರ್, 2020

ಕೆರೆಗಳ ಸಂರಕ್ಷಣೆ ಬಗ್ಗೆ

ಶ್ರೀ ಕೆ. ಟಿ. ಶ್ರೀಕಂಠೇಗೌಡ(ಪದವೀಧರರ ಕ್ಷೇತ್ರ) -

551 (572) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ರಾಜ್ಯದಲ್ಲಿ ಸಣ್ಣ ನೀರಾವರಿ ಇಲಾಖಾ ವ್ಯಾಪ್ತಿಗೆ ಬರುವ ಕೆರೆಗಳ ಸಂಖ್ಯೆ ಎಷ್ಟು;

(ಆ) ಆ ಕೆರೆಗಳ ಪೈಕಿ ಎಷ್ಟು ಒತ್ತುವರಿಯಾಗಿವೆ; ಒತ್ತುವರಿ ತೆರವಿಗೆ ಸರ್ಕಾರ ಕೈಗೊಂಡ ಕ್ರಮಗಳೇನು;

(ಇ) ಕೆರೆಗಳ ಪುನಃಶ್ಚೇತನಕ್ಕೆ ಯಾವ ಕ್ರಮ ಕೈಗೊಳ್ಳಲಾಗಿದೆ; (ವಿವರ ನೀಡುವುದು)

(ಈ) ಕೆರೆಗಳ ಸಂರಕ್ಷಣೆ ಬಗ್ಗೆ ಇತ್ತೀಚೆಗೆ ಹೈಕೋರ್ಟ್ ಸರ್ಕಾರದಿಂದ ಸಮಗ್ರ ವಿವರವನ್ನು ಸಲ್ಲಿಸಲು ನಿರ್ದೇಶನ ನೀಡಿರುವುದು ನಿಜವೇ;

(ಉ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು)